**ಕರ್ನಾಟಕ ಸರ್ಕಾರ**

ಸಂಖ್ಯೆ: ಕಪಂರಾಆ/ ಅಭಿವೃದ್ಧಿ/305(ಭಾಗ-2)/ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 21.09.2021.

**ಜಂಟಿ ಸುತ್ತೋಲೆ**

**ವಿಷಯ:** ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ ಗ್ರಾಮೀಣ ಮಹಿಳೆಯರಿಗಾಗಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ 10 ವಾರಗಳ ಕಾಲ **"ದೌರ್ಜನ್ಯದಿಂದ ಮುಕ್ತಿ"** ಕಾರ್ಯಕ್ರಮ ಹಮ್ಮಿಕೊಳ್ಳುವ ಬಗ್ಗೆ.

**ಉಲ್ಲೇಖ:**
1. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಪತ್ರ ಸಂಖ್ಯೆ: M- 11015/190/2021-CB, ದಿನಾಂಕ : 06/07/2021
2. ದಿನಾಂಕ 20-07-2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಅಧ್ಯಕ್ಷತೆಯಲ್ಲಿ ಆನ್ಲೈನ್ ಮೂಲಕ ನಡೆಸಲಾದ ಸಭೆ.
3. ದಿನಾಂಕ 03-08-2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಅಧ್ಯಕ್ಷತೆಯಲ್ಲಿ ನಡೆಸಲಾದ ಸಭೆಯ ನಡವಳಿಗಳು.

***

ಭಾರತ ಸರ್ಕಾರದ ಗೃಹ ಮಂತ್ರಾಲಯದ ಸಂಸದೀಯ ಸ್ಥಾಯಿ ಸಮಿತಿಯು ತನ್ನ 230ನೇ ವರದಿಯಲ್ಲಿ "ಮಹಿಳೆ ಮತ್ತು ಮಕ್ಕಳ ಮೇಲಿನ ದೌರ್ಜನ್ಯದ ಅಪರಾಧ" ಈ ಸಮಸ್ಯೆಯ ಕುರಿತಂತೆ ಚರ್ಚಿಸಿ ಪಂಚಾಯತಿಗಳಿಗೆ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತದೆ.

"ಕಾನೂನಿನ ನಿಯಮಗಳ ಅನುಸಾರ ಯಾವುದೇ ರೀತಿಯ ಹಿಂಸಾಚಾರಕ್ಕೆ ಆದ್ಯತೆ ಮೇಲೆ ಮತ್ತು ಸೂಕ್ಷ್ಮ ರೀತಿಯಲ್ಲಿ ಪ್ರತಿಕ್ರಿಯಿಸಲು ಪಂಚಾಯಿತಿಗಳನ್ನು ಸಂವೇದನೆಗೊಳಿಸಬೇಕು. ಮಹಿಳೆಯರೊಂದಿಗೆ ಕೆಟ್ಟದಾಗಿ ವರ್ತಿಸುವ ಹಾಗೂ ಮಹಿಳೆಯನ್ನು ನಿಂದಿಸುವ / ದೌರ್ಜನ್ಯ ಎಸಗುವ ವ್ಯಕ್ತಿಗಳೊಂದಿಗೆ ಸಮಾಲೋಚನೆ ನಡೆಸಲು ಗ್ರಾಮ ಪಂಚಾಯಿತಿಗಳ ಮಹಿಳಾ ಸದಸ್ಯರು ಮತ್ತು ಮಕ್ಕಳ ಆರೈಕೆ ಕೇಂದ್ರಗಳು ಮತ್ತು ಸ್ವಸಹಾಯ ಸಂಘಗಳಿಗೆ ಸಂಬಂಧಿಸಿದ ಮಹಿಳಾ ಸಿಬ್ಬಂದಿಯೊಂದಿಗೆ ನಿಯಮಿತವಾಗಿ ತರಬೇತಿ ಮತ್ತು ಓರಿಯಂಟೇಶನ್ ಕಾರ್ಯಕ್ರಮಗಳನ್ನು ನಡೆಸಬೇಕು. ಅದಲ್ಲದೆ, ಸೂಕ್ತ ವಕಾಲತ್ತು ಮತ್ತು ಸಮಾಲೋಚನೆಯ ಮೂಲಕ ಅನೌಪಚಾರಿಕ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರು ಸೇರಿದಂತೆ ಕೆಲಸ ಮಾಡುವ ಮಹಿಳೆಯರಲ್ಲಿ ಜಾಗೃತಿ ಮಟ್ಟವನ್ನು ಹೆಚ್ಚಿಸಲು ಸ್ಥಳೀಯ ಸಮಿತಿಗಳನ್ನು ಬಲಪಡಿಸುವ ಅಗತ್ಯವಿದೆ"

ಈ ಶಿಫಾರಸ್ಸುಗಳನ್ನು ಗಂಭೀರವಾಗಿ ಪರಿಗಣಿಸಿ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದಿಂದ ರಾಜ್ಯಗಳ / ಕೇಂದ್ರಾಡಳಿತ ಪ್ರದೇಶಗಳ ಪಂಚಾಯತ್ ರಾಜ್ ಇಲಾಖೆಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಮಿತಿಯ ಶಿಫಾರಸ್ಸುಗಳ ಅನುಪಾಲನೆಗೆ ಸೂಕ್ತ ಸೂಚನೆಗಳನ್ನು ನೀಡಲು ಉಲ್ಲೇಖ (1) ರ ಪತ್ರದಲ್ಲಿ ನಿರ್ದೇಶನ ನೀಡಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಮಹಿಳೆಯರ ಸುರಕ್ಷತೆಗೆ ಪಂಚಾಯತ್ ರಾಜ್ ಸಂಸ್ಥೆಯ ಮೂಲಕ ಹೆಚ್ಚಿನ ಆದ್ಯತೆಯನ್ನು ನೀಡುವುದು ಅತ್ಯಗತ್ಯವಾಗಿದೆ. ಈ ಕುರಿತು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಉಲ್ಲೇಖ (2) ಮತ್ತು (3)ರ ಸಭೆಗಳಲ್ಲಿ ಈ ಮಹಾದುದ್ದೇಶವನ್ನು ಅನುಷ್ಠಾನ ಮಾಡುವ ಸಲುವಾಗಿ ಸಂಬಂಧಪಟ್ಟ ಇಲಾಖೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳೊಂದಿಗೆ ಚರ್ಚಿಸಿ ರೂಪುರೇಷೆಗಳನ್ನು ಸಿದ್ಧಪಡಿಸುವ ಬಗ್ಗೆ ನಿರ್ಣಯಿಸಲಾಗಿರುತ್ತದೆ. ಅದರಂತೆ ವಿವಿಧ ಇಲಾಖೆಗಳ ಮತ್ತು ಸ್ವಯಂ ಸೇವಾ ಸಂಸ್ಥೆಗಳ ಸಹಭಾಗಿತ್ವದಲ್ಲಿ ಸ್ಥಳೀಯ ಚುನಾಯಿತ ಪ್ರತಿನಿಧಿಗಳು

ಮತ್ತು ಸಮುದಾಯ ಸಂಘಟನೆಗಳ ಮೂಲಕ #Freedom from Violence # Freedom from Discrimination ಎಂಬ ಘೋಷವಾಕ್ಯದೊಂದಿಗೆ 02 ಅಕ್ಟೋಬರ್ 2021 **ಗಾಂಧಿ ಜಯಂತಿಯ** ದಿನದಿಂದ 10 ಡಿಸೆಂಬರ್ **ಮಾನವ ಹಕ್ಕುಗಳ** ದಿನದವರೆಗೆ 10 ವಾರಗಳು **"ದೌರ್ಜನ್ಯದಿಂದ ಮುಕ್ತಿ"** ಕಾರ್ಯಕ್ರಮವನ್ನು ನಡೆಸಲು ನಿರ್ಣಯಿಸಲಾಗಿದೆ.

ಮಹಿಳೆಯರು "ದೌರ್ಜನ್ಯದಿಂದ ಮುಕ್ತಿ" ಹೊಂದಲು ತಮಗಿರುವ ಹಕ್ಕುಗಳು, ಈ ಹಕ್ಕುಗಳನ್ನು ಸಂರಕ್ಷಿಸಲು ಇರುವ ಕಾನೂನುಗಳ ಬಗ್ಗೆ ಅರಿವು ಅತ್ಯಂತ ಪ್ರಮುಖವಾದ ಅಂಶ. ಸುಭದ್ರ ಹಾಗೂ ಶಕ್ತಿಯುತ ಪರಿಸರವನ್ನು ನಿರ್ಮಿಸಲು ತರಬೇತಿಯು ಅಗತ್ಯವಾಗಿರುತ್ತದೆ ಹಾಗೂ ತರಬೇತಿಯ ಸಂದರ್ಭದಲ್ಲಿ ಮಹಿಳೆಯರಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳಿಸಲಾಗುತ್ತಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳು ಮತ್ತು ಕಾರ್ಯಕ್ರಮಗಳ ಕುರಿತು ಮಾಹಿತಿಯ ಜೊತೆಗೆ ಮಹಿಳೆಯರ ಮೇಲೆ ದೌರ್ಜನ್ಯವಾದಾಗ ಕೂಡಲೇ ಸಂಪರ್ಕಿಸಬೇಕಾದ ಹತ್ತಿರದ ಅಧಿಕಾರಿಗಳ ವಿವರ ಮತ್ತು ಲಭ್ಯವಿರುವ ಆರೋಗ್ಯ ಮತ್ತು ಆರ್ಥಿಕ ಸೌಲಭ್ಯ ಕುರಿತು ಮಾಹಿತಿಯನ್ನು ಸಹ ನೀಡಲು ನಿರ್ಣಯಿಸಲಾಗಿದೆ. ಆದ್ದರಿಂದ ಗ್ರಾಮ ಪಂಚಾಯಿತಿಗಳಿಂದ "ದೌರ್ಜನ್ಯದಿಂದ ಮುಕ್ತಿ" ಕಾರ್ಯಕ್ರಮವನ್ನು ಅತ್ಯಂತ ಅರ್ಥಪೂರ್ಣವಾಗಿ ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕಾಗಿದೆ.

1. **"ದೌರ್ಜನ್ಯದಿಂದ ಮುಕ್ತಿ" ಕಾರ್ಯಕ್ರಮಕ್ಕೆ ಚಾಲನೆ:** ದಿನಾಂಕ 02-10-2021ರಂದು ಗಾಂಧಿ ಜಯಂತಿಯ ಅಂಗವಾಗಿ "ದೌರ್ಜನ್ಯದಿಂದ ಮುಕ್ತಿ" ಕಾರ್ಯಕ್ರಮಕ್ಕೆ ಸಂಬಂಧಿಸಿದ ಮಾಹಿತಿ ಮತ್ತು ಸಂವಹನ (IEC) ಸಾಮಾಗ್ರಿಗಳನ್ನು ಬಿಡುಗಡೆ ಮಾಡುವುದರ ಮೂಲಕ ರಾಜ್ಯ ಮಟ್ಟದಲ್ಲಿ ಚಾಲನೆ ನೀಡಲಾಗುವುದು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಶ್ರಮದಾನ ಕಾರ್ಯಕ್ರಮದ ಜೊತೆಗೆ ಸ್ಥಳೀಯವಾಗಿ ವಿನೂತನ ರೀತಿಯ ಚಟುವಟಿಕೆಗಳನ್ನು ಮಹಿಳೆಯರಿಗಾಗಿ ಹಮ್ಮಿಕೊಂಡು "ದೌರ್ಜನ್ಯದಿಂದ ಮುಕ್ತಿ" ಕಾರ್ಯಕ್ರಮಕ್ಕೆ ಚಾಲನೆ ನೀಡಬೇಕು.

2. **ತರಬೇತಿ ಕಾರ್ಯಕ್ರಮ:**"ದೌರ್ಜನ್ಯದಿಂದ ಮುಕ್ತಿ" ಕುರಿತು ಈ ಕೆಳಕಂಡವರಿಗೆ ತರಬೇತಿ ಮತ್ತು ಮಾಹಿತಿ ನೀಡಲು ಯೋಜಿಸಲಾಗಿದೆ.
   - ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಹಾಗೂ ಗ್ರಾಮ ಪಂಚಾಯಿತಿಯ ಎಲ್ಲಾ ಸದಸ್ಯರುಗಳಿಗೆ.
   - ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೆಲಸ ಮಾಡುತ್ತಿರುವ ಮಹಿಳೆಯರಿಗೆ ಮತ್ತು ಮಹಿಳಾ ಕಾಯಕ ಬಂಧುಗಳಿಗೆ.
   - ಗ್ರಾಮೀಣ ಪ್ರದೇಶದಲ್ಲಿನ ಸ್ವಸಹಾಯ ಸಂಘದ ಮಹಿಳೆಯರಿಗೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ ಅಡಿಯಲ್ಲಿ ಸಂಘಟಿಸಲಾದ ಜಿ.ಪಿ.ಎಲ್.ಎಫ್. ಸ್ವಸಹಾಯ ಗುಂಪುಗಳ ಮಹಿಳೆಯರಿಗೆ.
   - ಅಂಗನವಾಡಿ ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು, ಅಂಗನವಾಡಿ ಸಹಾಯಕರುಗಳಿಗೆ.
   - ಬಾಲ ವಿಕಾಸ ಸಮಿತಿ ಸದಸ್ಯರು, ಮಹಿಳಾ ಮತ್ತು ಮಕ್ಕಳ ಕಾವಲು ಸಮಿತಿ ಸದಸ್ಯರು ಹಾಗೂ ಸ್ಥಳೀಯ ಮಹಿಳಾ ಸಂಘಗಳ ಪ್ರತಿನಿಧಿಗಳಿಗೆ
   - ಹದಿಹರೆಯದ ಬಾಲಕಿಯರು ಮತ್ತು ಬಾಲಕರಿಗೆ (ಸಮತಾ ಸ್ಫೂರ್ತಿ ಮಾದರಿಯಲ್ಲಿ)

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ ಆಯುಕ್ತಾಲಯ, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ (ANSSIRD), ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ(KSAPS), ಕರ್ನಾಟಕ ಆರೋಗ್ಯ ಸಂವರ್ಧನ ಪ್ರತಿಷ್ಠಾನ(KHPT), ಇವರುಗಳಿಂದ ವಿವಿಧ ಕ್ಷೇತ್ರಗಳಲ್ಲಿರುವ ಮಹಿಳೆಯರಿಗೆ ಸಂಬಂಧಿಸಿದ ಇಲಾಖೆ/ಸಂಸ್ಥೆಯಿಂದ ತರಬೇತಿಯನ್ನು ನೀಡಲಾಗುವುದು. ಆಯೋಜಿಸಲಾಗುವ ತರಬೇತಿಗಳಿಗೆ ಸಂಬಂಧಿಸಿದ ಮಹಿಳೆಯರು ಭಾಗವಹಿಸಲು ಗ್ರಾಮ ಪಂಚಾಯಿತಿ ಮತ್ತು ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.